# ಕರ್ನಾಟಕ ವಿಧಾನ ಪರಿಷತ್

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 693
2. ಸದಸ್ಯರ ಹೆಸರು : ಶ್ರೀ ಅ.ದೇವೇಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು)
3. ಉತ್ತರಿಸಬೇಕಾಗಿದ್ದ ದಿನಾಂಕ : 17.12.2021
4. ಉತ್ತರಿಸುವವರು : ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಕಛೇರಿ ಹಾಗೂ ಎಲ್ಲಾ ತಾಲ್ಲೂಕು ಪಂಚಾಯತ್ ಕಛೇರಿಗಳಲ್ಲಿ ಖಾಯಂ ಗ್ರೂಪ್-ಸಿ ಮತ್ತು ಗ್ರೂಪ್-ಡಿ ವರ್ಗದವರ (Staffing pattern) ಒಟ್ಟು ಸಂಖ್ಯೆ ಎಷ್ಟು; | ಜಿಲ್ಲಾ ಪಂಚಾಯತ್/ತಾಲ್ಲೂಕು ಪಂಚಾಯತ್ ಕಛೇರಿಗಳಲ್ಲಿ ಮಂಜೂರಾಗಿರುವ ಗ್ರೂಪ್-ಸಿ ಮತ್ತು ಗ್ರೂಪ್-ಡಿ ವರ್ಗದ ಖಾಯಂ ಹುದ್ದೆಗಳ ಸಂಖ್ಯೆ-5981 |
| ಆ | ಪ್ರಸ್ತುತ ಎಲ್ಲಾ ಜಿಲ್ಲಾ ಪಂಚಾಯತ್ ಕಚೇರಿ ಹಾಗೂ ಎಲ್ಲಾ ತಾಲ್ಲೂಕು ಪಂಚಾಯತ್ ಕಚೇರಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ಗ್ರೂಪ್ 'ಸಿ' ಮತ್ತು ಗ್ರೂಪ್ 'ಡಿ' ವರ್ಗದವರ ಸಂಖ್ಯೆ ಎಷ್ಟು; | ಖಾಯಂ ನೌಕರರ ಸಂಖ್ಯೆ:1504<br><br>ಕರ್ನಾಟಕ ಸಾಮಾನ್ಯ ಸೇವೆ (ಪಂಚಾಯತ್ ರಾಜ್ ವಿಭಾಗ) (ವೃಂದ ಮತ್ತು ನೇಮಕಾತಿ) ನಿಯಮಗಳು 2020 ರ ಅನುಸಾರ ಬೆರಳಚ್ಚುಗಾರರು, ವಾಹನ ಚಾಲಕ ಹಾಗೂ ಗ್ರೂಪ್-ಡಿ ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದ್ದು, ಅದರಂತೆ 1244 ಹುದ್ದೆಗಳ ಎದುರು ಹೊರಗುತ್ತಿಗೆ ಮೇಲೆ ನೇಮಕ ಮಾಡಲಾಗಿದೆ. |
| ಇ | ಖಾಲಿ ಎಲ್ಲಾ ಜಿಲ್ಲಾ ಪಂಚಾಯತ್ ಕಛೇರಿ ಹಾಗೂ ಎಲ್ಲಾ ತಾಲ್ಲೂಕು ಪಂಚಾಯತ್ ಕಛೇರಿಗಳಲ್ಲಿ ಸಿಬ್ಬಂದಿ ವರ್ಗದವರ ನಿವೃತ್ತಿಯಿಂದ ಹಾಗೂ ನಿಧನದಿಂದ ಖಾಲಿ ಇರುವ ಗ್ರೂಪ್ 'ಸಿ' ಮತ್ತು 'ಡಿ' ವರ್ಗದ ಹುದ್ದೆಗಳೆಷ್ಟು; | 846 |

| | | |
|---|---|---|
| ಈ | ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಹಾಗೂ ಎಲ್ಲಾ ತಾಲ್ಲೂಕು ಪಂಚಾಯತಿಗಳಲ್ಲಿ ಖಾಲಿ ಇರುವ ಖಾಯಂ ಗ್ರೂಪ್ 'ಸಿ' ಮತ್ತು 'ಡಿ' ಸಿಬ್ಬಂದಿ ವರ್ಗದವರ ಹುದ್ದೆಗಳು ಭರ್ತಿ ಆಗದೆ, ಸಿಬ್ಬಂದಿಯ ಕೊರತೆಯಿಂದಾಗಿ ಕಚೇರಿಯ ಆಡಳಿತ ನಿರ್ವಹಣೆ ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಖಾಲಿ ಹುದ್ದೆಗಳು ಭರ್ತಿಯಾಗದ ಕಾರಣ ಕಛೇರಿ ಕೆಲಸ ನಿರ್ವಹಣೆಯಲ್ಲಿ ಅಲ್ಪಮಟ್ಟಿನ ತೊಂದರೆಯಾಗುತ್ತಿರುವುದು ಸರ್ಕಾರದ ಗಮನದಲ್ಲಿದೆ. ಖಾಲಿ ಹುದ್ದೆಗಳ ಎದುರು ಹೆಚ್ಚುವರಿ ಪ್ರಭಾರ, ನಿಯೋಜನೆ ಮೂಲಕ ಸೇವೆ ಪಡೆದು ಕಾರ್ಯನಿರ್ವಹಣೆ ಮಾಡಲಾಗುತ್ತಿದೆ. |
| ಉ | ಎಲ್ಲಾ ಜಿಲ್ಲಾ ಪಂಚಾಯತ್ ಕಛೇರಿ ಹಾಗೂ ಎಲ್ಲಾ ತಾಲ್ಲೂಕು ಪಂಚಾಯತಿ ಕಛೇರಿಗಳಲ್ಲಿ ಖಾಲಿ ಇರುವ ಖಾಯಂ ಗ್ರೂಪ್ 'ಸಿ' ಮತ್ತು 'ಡಿ' ಹುದ್ದೆಗಳನ್ನು ಈವರೆಗೂ ತುಂಬದಿರುವ ಕಾರಣವೇನು; ಖಾಲಿ ಹುದ್ದೆಗಳನ್ನು ತುಂಬಲು ಇನ್ನು ಎಷ್ಟು ಸಮಯಾವಕಾಶ ಬೇಕು (ಮಾಹಿತಿ ನೀಡುವುದು). | ಈ ಹಿಂದೆ ಇದ್ದ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಜಿಲ್ಲಾ ಪಂಚಾಯತ್/ತಾಲ್ಲೂಕು ಪಂಚಾಯತ್ ಕಛೇರಿಗಳಲ್ಲಿ ಮಂಜೂರಾಗಿರುವ ಹುದ್ದೆಗಳನ್ನು ನೇರ ನೇಮಕಾತಿ ಕೋಟಾದಡಿ ಭರ್ತಿಮಾಡಲು ಅವಕಾಶ ಇಲ್ಲದ ಕಾರಣ, ಗಣನೀಯ ಪ್ರಮಾಣದ ಹುದ್ದೆಗಳು ಖಾಲಿ ಉಳಿದಿದ್ದವು. ಪ್ರಸ್ತುತ, ಕರ್ನಾಟಕ ಸಾಮಾನ್ಯ ಸೇವೆ (ಪಂಚಾಯತ್ ರಾಜ್ ವಿಭಾಗ) (ವೃಂದ ಮತ್ತು ನೇಮಕಾತಿ) ನಿಯಮಗಳು 2020 ನ್ನು ರಚಿಸಿದ್ದು, ಅದರಡಿ ಮಂಜೂರಾಗಿರುವ ವಿವಿಧ ಗ್ರೂಪ್-ಸಿ ಹುದ್ದೆಗಳನ್ನು ನೇರ ನೇಮಕಾತಿ ಕೋಟಾದಡಿ ಭರ್ತಿ ಮಾಡಿ ಕೊಳ್ಳಲು ಅವಕಾಶ ಕಲ್ಪಿಸಿದ್ದು, ನೇರ ನೇಮಕಾತಿ ಕೋಟಾದಡಿ ಭರ್ತಿ ಮಾಡಬೇಕಾದ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ. |

ಗ್ರಾಅಪ 255 ಕೆ.ಎಸ್.ಎಸ್ 21(ಇ)

(ಪ್ರಿಯಾಂಕ ಖರ್ಗೆ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು